# ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾಲಯ

ಜ್ಞಾನ ಸಾಗರ ಆವರಣ, ವಿನಾಯಕ ನಗರ, ಕಂಟೋನ್ಮೆಂಟ್, ಬಳ್ಳಾರಿ – 583105

**ಕುಲಸಚಿವರು (ಮೌಲ್ಯಮಾಪನ)** **ದೂರವಾಣಿ: 08392-241011**


ಸಂಖ್ಯೆ: ವಿಶ್ರೀಕೃವಿಬ/ಪರೀಕ್ಷಾ/ಸ್ನಾತಕ/2015–16/ 3896 ದಿನಾಂಕ: 03.02.2016

## ಅಧಿಸೂಚನೆ

**ವಿಷಯ:** ಸ್ನಾತಕ ಪದವಿಯ ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನದ ಕುರಿತು.

****

ಸ್ನಾತಕ ಪದವಿಯ ಬಿ.ಎ. 3ನೇ ಹಾಗೂ 5ನೇ ಸೆಮಿಸ್ಟರ್, ಬಿ.ಕಾಂ. 3ನೇ ಹಾಗೂ 5ನೇ ಸೆಮಿಸ್ಟರ್, ಬಿ.ಬಿ.ಎಂ. 3ನೇ ಹಾಗೂ 5ನೇ ಸೆಮಿಸ್ಟರ್, ಬಿ.ಎಸ್ಸಿ. 3ನೇ ಹಾಗೂ 5ನೇ ಸೆಮಿಸ್ಟರ್, ಬಿ.ಸಿ.ಎ. 3ನೇ ಹಾಗೂ 5ನೇ ಸೆಮಿಸ್ಟರ್, ಬಿ.ಎಸ್ಸಿ (ಜಿ.ಎಂ.ಟಿ) 3ನೇ ಹಾಗೂ 5ನೇ ಸೆಮಿಸ್ಟರ್, ಬಿ.ಎಸ್.ಡಬ್ಲ್ಯೂ 3ನೇ ಹಾಗೂ 5ನೇ ಸೆಮಿಸ್ಟರ್ ಮತ್ತು ಬಿ.ಹೆಚ್.ಎಂ. 3ನೇ ಹಾಗೂ 5ನೇ ಸೆಮಿಸ್ಟರ್‌ನ (Repeater & Fresher) ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸುವ ದಿನಾಂಕಗಳು ಈ ಕೆಳಗಿನಂತಿರುತ್ತವೆ.

| ಕ್ರಸಂ | ವಿವರ | ಕೋರ್ಸ್ | ಅರ್ಜಿ ಸಲ್ಲಿಸುವ ಕೊನೆಯ ದಿನಾಂಕ |
|---|---|---|---|
| 1. | ಮರು ಎಣಿಕೆ | ಒಂದು ವಿಷಯಕ್ಕೆ ರೂ. 150/– | 11.02.2016 |
| 2. | ಛಾಯಾ ಪ್ರತಿ | ಒಂದು ವಿಷಯಕ್ಕೆ ರೂ. 300/– | 11.02.2016 |
| 3. | ಮರು ಮೌಲ್ಯಮಾಪನ | ಒಂದು ವಿಷಯಕ್ಕೆ ರೂ. 700/–<br>(ಪ.ಜಾ/ಪ.ಪಂ.ಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ರೂ.350/–) | 22.02.2016 |

**ಸೂಚನೆಗಳು:**

1. ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಅರ್ಜಿ ಸಲ್ಲಿಸಲು ಬಯಸುವ ವಿದ್ಯಾರ್ಥಿಗಳು ವೆಬ್‌ಸೈಟ್‌ನ್ನು (www.vskub.ac.in & results.logisys.net.in/vskub) ಸಂಪರ್ಕಿಸಿ, ಆನ್‌ಲೈನ್ ಮೂಲಕ ನಿಗಧಿತ ದಿನಾಂಕದೊಳಗೆ ಅರ್ಜಿ ಸಲ್ಲಿಸತಕ್ಕದ್ದು.
2. ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಮರು ಎಣಿಕೆಗೆ ಅರ್ಜಿ ಸಲ್ಲಿಸುವುದು ಅವಶ್ಯವಿರುವುದಿಲ್ಲ.
3. ಛಾಯಾ ಪ್ರತಿ ಮತ್ತು ಮರು ಮೌಲ್ಯಮಾಪನಕ್ಕೆ ಅರ್ಜಿ ಸಲ್ಲಿಸಲು ಬಯಸುವ ಅಭ್ಯರ್ಥಿಗಳು ಪ್ರತ್ಯೇಕವಾಗಿ ಅರ್ಜಿ ಸಲ್ಲಿಸತಕ್ಕದ್ದು. ಮರು ಮೌಲ್ಯಮಾಪನಕ್ಕೆ ಒಬ್ಬರೇ ಅಭ್ಯರ್ಥಿಯು ಒಂದಕ್ಕಿಂತ ಹೆಚ್ಚು ಸೆಮಿಸ್ಟರ್‌ಗೆ ಅರ್ಜಿ ಸಲ್ಲಿಸಲು ಬಯಸಿದ್ದಲ್ಲಿ, ಪ್ರತ್ಯೇಕವಾಗಿ ಸೆಮಿಸ್ಟರ್‌ವಾರು ಅರ್ಜಿ ಸಲ್ಲಿಸತಕ್ಕದ್ದು.
4. ಆನ್‌ಲೈನ್ ಪೋರ್ಟಲ್‌ನಲ್ಲಿ ಫಲಿತಾಂಶ ವೀಕ್ಷಿಸಿದ ನಂತರ, ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನ ಆಯ್ಕೆಗಳಲ್ಲಿ ಯಾವುದು ಬೇಕೋ ಅದನ್ನು ಆಯ್ಕೆ ಮಾಡಿ click ಮಾಡಬೇಕು.
5. ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಯಾವ ಯಾವ ವಿಷಯಗಳಲ್ಲಿ ಅರ್ಜಿ ಸಲ್ಲಿಸಬೇಕೋ ಅವುಗಳನ್ನು ಆಯ್ಕೆ ಮಾಡಿಕೊಳ್ಳುವುದು.
6. ಮರು ಎಣಿಕೆ, ಛಾಯಾ ಪ್ರತಿ ಹಾಗೂ ಮರು ಮೌಲ್ಯಮಾಪನಕ್ಕಾಗಿ ಯಾವ ಯಾವ ವಿಷಯಗಳಲ್ಲಿ ಅರ್ಜಿ ಸಲ್ಲಿಸಲು ಆಯ್ಕೆ ಮಾಡಿದ ತಕ್ಷಣ ಅದಕ್ಕೆ ಸಂಬಂಧಿಸಿದ ಶುಲ್ಕ ಪ್ರಕಟಗೊಳ್ಳುವುದು. ನಂತರ ಶುಲ್ಕ ಪಾವತಿಸುವ ಬಗೆಯನ್ನು ಆಯ್ದುಕೊಂಡ ಮೇಲೆ ಅರ್ಜಿ ಹಾಗೂ ಚಲನ್‌ಗಳ ಮುದ್ರಿತ ಪ್ರತಿಯನ್ನು ತೆಗೆದುಕೊಂಡು ಹತ್ತಿರದ ಅಂಚೆ ಕಛೇರಿಯಲ್ಲಿ ಶುಲ್ಕವನ್ನು ಪಾವತಿಸಿ, ಅರ್ಜಿ ಹಾಗೂ ಚಲನ್ ಪ್ರತಿಯನ್ನು ತಮ್ಮ ಬಳಿ ಇರಿಸಿಕೊಳ್ಳತಕ್ಕದ್ದು.
7. ಶುಲ್ಕ ಪಾವತಿಸಿದ ನಂತರ ಬರುವ "Unique Application Number"ನ್ನು ವಿಶ್ವವಿದ್ಯಾಲಯದ ಜೊತೆ ಮಾಡುವ ಪತ್ರ ವ್ಯವಹಾರಗಳಲ್ಲಿ ನಮೂದಿಸಬೇಕು.
8. ವಿದ್ಯಾರ್ಥಿಗಳು ಅರ್ಜಿ, ಚಲನ್ ಮತ್ತು ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು ಜಾತಿ/ಆದಾಯ ಪ್ರಮಾಣ ಪತ್ರದ ಪ್ರತಿಗಳನ್ನು ತಮ್ಮ ಮಹಾವಿದ್ಯಾಲಯದ ಪ್ರಾಂಶುಪಾಲರಿಗೆ ಸಲ್ಲಿಸುವುದು.

ಕುಲಸಚಿವರು (ಮೌಲ್ಯಮಾಪನ)
03/2/16
REGISTRAR (EVAL)
Vijayanagara Sri Krishnadevaraya University,
Jnana Sagar Campus, Vinayakanagar,
Cantonment, BALLARI-583 104.

ಗೆ,

ಸಂಬಂಧಿಸಿದ ಮಹಾವಿದ್ಯಾಲಯಗಳ ಪ್ರಾಂಶುಪಾಲರುಗಳಿಗೆ – ವಿದ್ಯಾರ್ಥಿಗಳ ಗಮನಕ್ಕೆ ತರಲು ಸೂಚಿಸಲಾಗಿದೆ.